All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

07.08.2025 2.30 p.m.

<><><><>

ಮುಖ್ಯಾಂಶಗಳು

- ಲಾಲ್ ಬಾಗ್‌ನಲ್ಲಿ ರಾಣಿ ಕಿತ್ತೂರು ಚೆನ್ನಮ್ಮ, ಸಂಗೊಳ್ಳಿ ರಾಯಣ್ಣ ವಿಷಯಾಧಾರಿತ ಫಲಪುಷ್ಪ ಪ್ರದರ್ಶನ ಉದ್ಘಾಟಿಸಿದ ಮುಖ್ಯಮಂತ್ರಿ
- ಧರ್ಮಸ್ಥಳ ಗುಂಪು ಘರ್ಷಣೆ : ತನಿಖೆ ನಡೆಸಿ ವರದಿ ನೀಡಲು ಜಿ ಪರಮೇಶ್ವರ್ ಸೂಚನೆ
- ಪ್ರಧಾನಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ಧಗೊಳಿಸುವಿಕೆ ಯೋಜನೆ : ದಾವಣಗೆರೆಯಲ್ಲಿ ೨೦೦ ಜನರಿಗೆ ಸಾಲ ಮಂಜೂರು
- ರಾಜ್ಯದ ಎರಡೂ ಕಡೆ ಏರೋಸ್ಪೇಸ್ ಕಾರಿಡಾರ್‌ಗೆ ರಕ್ಷಣಾ ಸಚಿವರ ಒಪ್ಪಿಗೆ - ಸಚಿವ ಎಂ.ಬಿ. ಪಾಟೀಲ್

<><><><>

ತೋಟಗಾರಿಕೆ ಇಲಾಖೆ ಲಾಲ್ ಬಾಗ್ ಬೆಂಗಳೂರು ಇವರ ವತಿಯಿಂದ ಲಾಲ್ ಬಾಗ್ ಗಾಜಿನ ಮನೆಯಲ್ಲಿ ಆಯೋಜಿಸಲಾಗಿದ್ದ ವೀರ ರಾಣಿ ಕಿತ್ತೂರು ಚೆನ್ನಮ್ಮ ಮತ್ತು ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ವಿಷಯಾಧಾರಿತ ಸ್ವಾತಂತ್ರೋತ್ಸವ ೨೧೮ನೇ ಫಲಪುಷ್ಪ ಪ್ರದರ್ಶನ-೨೦೨೫ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಉದ್ಘಾಟನೆ ಮಾಡಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಿತ್ತೂರು ರಾಣಿ ಚೆನ್ನಮ್ಮ ಬ್ರಿಟೀಷರನ್ನು ಸೋಲಿಸಿ ೨೦೦ ವರ್ಷ ಆಗಿರುವ ಸಂದರ್ಭದಲ್ಲಿ ಅವರ ಚರಿತ್ರೆಯ ವಿಷಯಾಧಾರಿತವಾಗಿ ಲಾಲ್ ಬಾಗ್‌ನಲ್ಲಿ ಫಲಪುಷ್ಪ ಪ್ರದರ್ಶನ ಏರ್ಪಡಿಸಲಾಗಿದೆ. ಕಿತ್ತೂರು ಚೆನ್ನಮ್ಮ ಹಿಂದುಳಿದ ವರ್ಗದ ನಾಯಕರನ್ನು ಜೊತೆಯಲ್ಲಿರಿಸಿಕೊಂಡು ಬ್ರಿಟೀಷರ ವಿರುದ್ಧ ಹೋರಾಟ ಮಾಡಿದ ದಿಟ್ಟ ಮಹಿಳೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ತೋಟಗಾರಿಕೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

**ಧ್ವನಿ : ಸಿದ್ದರಾಮಯ್ಯ (೩೧ ಸೆಕೆಂಡ್‌ಗಳು)**

<><><><>

ಧರ್ಮಸ್ಥಳದಲ್ಲಿ ನಿನ್ನೆ ಎರಡು ಗುಂಪುಗಳ ಮಧ್ಯೆ ನಡೆದ ಘರ್ಷಣೆ ಹಿನ್ನೆಲೆಯಲ್ಲಿ ಎರಡೂ ಗುಂಪಿನ ಉದ್ದೇಶಗಳ ಕುರಿತು ತನಿಖೆ ನಡೆಸಿ ವರದಿ ನೀಡಲು ಅಧಿಕಾರಿಗಳಿಗೆ ಸೂಚಿಸಿರುವುದಾಗಿ ಗೃಹ ಸಚಿವ ಜಿ.ಪರಮೇಶ್ವರ್ ಹೇಳಿದ್ದಾರೆ. ಸದಾಶಿವನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಲ್ಲಿನ ಜನಸಮುದಾಯ ಎಸ್‌ಐಟಿ ಮಾಡಲು ಒತ್ತಾಯಿಸಿದ್ದರು. ಬಹಳ ಎಚ್ಚರಿಕೆಯಿಂದ ಪರಿಶೀಲನೆ ಮಾಡಿ ಎಸ್‌ಐಟಿ ರಚಿಸಲಾಗಿದೆ. ಅನಾಮಿಕ ವ್ಯಕ್ತಿ ಇಲ್ಲಿ ಕೊಲೆಯಾಗಿದೆ, ತಾನೇ ಅನೇಕ ಶವಗಳನ್ನು ಹೂತಿರುವುದಾಗಿ ಹೇಳಿಕೆ ನೀಡಿದ್ದ. ಆ ವ್ಯಕ್ತಿ, ಮ್ಯಾಜಿಸ್ಟ್ರೇಟರ್ ಮುಂದೆ ನೀಡಿದ್ದ ೧೬೪ ಹೇಳಿಕೆ ಆಧರಿಸಿ ತನಿಖೆ ಮಾಡಬೇಕು ಎಂದು ಮ್ಯಾಜಿಸ್ಟ್ರೀಯಲ್ ಸೂಚನೆಯೂ ಇತ್ತು. ಅದನ್ನು ಗಂಭೀರವಾಗಿ ಪರಿಗಣಿಸಿ ಎಸ್‌ಐಟಿ ರಚನೆ ಮಾಡಲಾಗಿದೆ ಎಂದು ತಿಳಿಸಿದರು. ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಎರಡು ಗುಂಪುಗಳ ನಡುವೆ ಘರ್ಷಣೆಯಾಗಿದ್ದು, ದೂರು, ಪ್ರತಿದೂರು ನೀಡಲಾಗಿದೆ. ಎಫ್‌ಐಆರ್ ದಾಖಲಿಸುವಂತೆ ಸೂಚಿಸಲಾಗಿದೆ. ಅದರ ತನಿಖೆ ನಡೆಸಲಾಗುತ್ತದೆ. ಯಾವ ರೀತಿ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂಬುದನ್ನು ಎಸ್‌ಐಟಿ ಹಾಗೂ ಸ್ಥಳೀಯ ಪೊಲೀಸರು ನಿರ್ಧರಿಸುತ್ತಾರೆ ಎಂದು ಅವರು ತಿಳಿಸಿದ್ದಾರೆ. ಎಸ್‌ಐಟಿಯವರು ತನಿಖೆಯನ್ನು ತಾಂತ್ರಿಕವಾಗಿ ಮತ್ತು ಆಧುನಿಕವಾಗಿ ಸತ್ಯ ಹೊರಗೆ ಬರುವ

ರೀತಿಯಲ್ಲಿ ಮಾಡಬೇಕು. ಆ ಕೆಲಸವನ್ನು ಎಸ್‌ಐಟಿ ಮಾಡುತ್ತದೆ. ಅವರನ್ನು ಈಗಲೇ ಪ್ರಶ್ನೆ ಮಾಡಿದರೆ ತನಿಖೆಗೆ ಅರ್ಥವಿಲ್ಲ. ಎಸ್‌ಐಟಿ ತನಿಖೆಯ ಬಗ್ಗೆ ಸರ್ಕಾರ ಯಾವುದೇ ಸೂಚನೆ ಕೊಡುವುದಿಲ್ಲ ಎಂದು ಅವರು ಹೇಳಿದರು. ಈ ನಡುವೆ ಧರ್ಮಸ್ಥಳ ಗ್ರಾಮದಲ್ಲಿ ಮೃತದೇಹಗಳನ್ನು ಹೂತು ಹಾಕಲಾಗಿದೆ ಎನ್ನುವ ಪ್ರಕರಣದ ಎಸ್‌ಐಟಿ ತಂಡದ ತನಿಖೆ ಮುಂದುವರಿದಿದೆ.  ಸಾಕ್ಷಿ ದೂರುದಾರ ಗುರುತಿಸಿದ ಒಟ್ಟು ೧೩ ಸ್ಥಳಗಳ ಪೈಕಿ ಇದುವರೆಗೆ ೧೨ ಕಡೆ ಶೋಧ ಕಾರ್ಯ ನಡೆದಿದ್ದು, ಎರಡು ಕಡೆ ಮಾನವ ದೇಹದ ಮೂಳೆಗಳು ಪತ್ತೆಯಾಗಿವೆ. ಇಂದು ಕೊನೆಯ ಸ್ಥಳದಲ್ಲಿ ಶೋಧ ನಡೆಯಲಿದೆ.  ದೂರುದಾರ ತೋರಿಸಿದ ಆರನೇ ಮತ್ತು ೧೧ನೇ ಸ್ಥಳದಲ್ಲಿ ಮೃತದೇಹದ ಕುರುಹುಗಳು ಪತ್ತೆಯಾಗಿದ್ದವು.  ದೂರುದಾರ ತೋರಿಸಿದ ಎಲ್ಲಾ ಸ್ಥಳಗಳನ್ನು ತನಿಖಾ ತಂಡ  ಮೊದಲೇ ಗುರುತು ಮಾಡಿ ಇಟ್ಟಿದ್ದು, ಬಳಿಕ ಹಂತ ಹಂತವಾಗಿ ಶೋಧ ನಡೆಸಿದೆ.  ಶೋಧ ಕಾರ್ಯ ನಡೆಯುವ ವೇಳೆ ಹೆಚ್ಚಿನ ಸಂಖ್ಯೆಯಲ್ಲಿ ಕುತೂಹಲಿಗರು ಸೇರುತ್ತಿರುವುದರಿಂದ ಪ್ರತಿ ಕಡೆಯೂ ಬಿಗಿ ಪೊಲೀಸ್ ಬಂದೋಬಸ್ತ್‌ನ್ನು ಮಾಡಲಾಗಿತ್ತು.

<><><><>

ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ದಗೊಳಿಸುವಿಕೆ ಯೋಜನೆಯಡಿ ದಾವಣಗೆರೆ ಜಿಲ್ಲೆಯಲ್ಲಿ ಸಾಲ ಕೋರಿ ಸಲ್ಲಿಕೆಯಾಗಿದ್ದ ೬೫೩ ಅರ್ಜಿಗಳ ಪೈಕಿ ೨೦೦ ಜನರಿಗೆ ೧೬ ಕೋಟಿ ೫೨ ಲಕ್ಷ ರೂಪಾಯಿ ಸಾಲ ಮಂಜೂರು ಮಾಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ ವಿಠಲರಾವ್ ಹೇಳಿದರು. ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ದಗೊಳಿಸುವಿಕೆ ಯೋಜನೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರೈತ ಕುಟುಂಬ, ಸಣ್ಣ ಮತ್ತು ಅತೀ ಸಣ್ಣ ಉದ್ದಿಮೆದಾರ ಹಾಗೂ ಮಹಿಳೆಯರನ್ನು ಬಲವರ್ಧನೆಗೊಳಿಸಲು ಭಾರತ ಸರ್ಕಾರದ ಪ್ರಾಯೋಜಿತ ಪ್ರಮುಖ ಯೋಜನೆಯಾಗಿದೆ ಎಂದು ಅವರು ಹೇಳಿದರು. ಹೊನ್ನಾಳಿ ತಾಲ್ಲೂಕಿನ ಕೂಲಂಬಿ ಗ್ರಾಮದ ಯುವ ರೈತರೊಬ್ಬರು ಯೋಜನೆಯಡಿ ಸಿರಿಧಾನ್ಯದಿಂದ ತಯಾರಿಸಿದ ಉತ್ಪನ್ನವನ್ನು ದೇಶ ವಿದೇಶಗಳಿಗೆ ರಫ್ತು ಮಾಡುತ್ತಿದ್ದು, ವಿಮಾನಗಳಲ್ಲಿ ಪ್ರಯಾಣಿಕರಿಗೆ ಮಿಲೆಟ್ ಬಿಸ್ಕೆಟ್‌ನ್ನು ಬಳಸಲು ಅವಕಾಶ ದೊರಕಿಸಿಕೊಟ್ಟಿದೆ. ಅದೇ ರೀತಿ ಪ್ರತಿಯೊಬ್ಬರೂ ಸಿರಿಧಾನ್ಯ ಮತ್ತು ಇತರೆ ಧಾನ್ಯಗಳ ಸಂಸ್ಕರಣೆ ಬಳಸಿ ಸ್ವಾಲವಂಬಿಗಳಾಗಬೇಕಿದೆ ಎಂದು ಹೇಳಿದರು.

<><><><>

ಏರೋಸ್ಪೇಸ್ ಕಾರಿಡಾರ್ ಬಗ್ಗೆ ರಕ್ಷಣಾ ಸಚಿವರನ್ನು ಭೇಟಿ ಮಾಡಿ, ರಾಜ್ಯದ ಚಿಕ್ಕಬಳ್ಳಾಪುರ ಹಾಗೂ ಹುಬ್ಬಳ್ಳಿ-ಧಾರವಾಡ, ಬೆಳಗಾವಿ ಅಥವಾ ವಿಜಯಪುರದಲ್ಲಿ ಎರಡು ಕಡೆ ಏರೋಸ್ಪೇಸ್ ಕಾರಿಡಾರ್ ಕೇಳಲಾಗಿದೆ ಎಂದು ಸಚಿವ ಎಂ.ಬಿ ಪಾಟೀಲ್ ಹೇಳಿದ್ದಾರೆ. ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಮಾತನಾಡಿದ ಅವರು, ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳುವದಾಗಿ ರಕ್ಷಣಾ  ಸಚಿವ ರಾಜನಾಥಸಿಂಗ್ ಹೇಳಿದ್ದಾರೆ ಎಂದು ತಿಳಿಸಿದ್ದಾರೆ.

**ಧ್ವನಿ : ಎಂ.ಬಿ. ಪಾಟೀಲ್ (೨೫  ಸೆಕೆಂಡ್‌ಗಳು)**

<><><><>

ಕೊಡಗು ಜಿಲ್ಲಾ ಲೀಡ್ ಬ್ಯಾಂಕ್  ವತಿಯಿಂದ ಜನ ಸುರಕ್ಷಾ ಅಭಿಯಾನ  ಮಡಿಕೇರಿ ತಾಲೂಕಿನ ಮದೆ ಗ್ರಾಮದಲ್ಲಿ ನಡೆಯಿತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕೆನರಾ ಬ್ಯಾಂಕ್‌ನ ಅಧಿಕಾರಿ ವಿ.ರಾಜೇಶ್ ಕುಮಾರ್ ಅವರು ಜನ ಸಾಮಾನ್ಯರು ಕಡ್ಡಾಯವಾಗಿ ಸಾಮಾಜಿಕ ಭದ್ರತಾ ಯೋಜನೆಗಳನ್ನು ಮಾಡಿಸುವುದರ ಮೂಲಕ ಅದರ ಪ್ರಯೋಜನವನ್ನು ಪಡೆದುಕೊಳ್ಳುವಂತೆ ಸಲಹೆ ನೀಡಿದರು. ಅವಾರ್ಡ್ ಸಂಸ್ಥೆಯ ಸಮಾಲೋಚಕರಾದ ಪ್ರಿಯಾ ಕೆ.ಎಲ್. ಮಾಹಿತಿ ನೀಡಿದರು.

<><><><>

ಉತ್ತರಕನ್ನಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ನುಲಿಯ ಚಂದಯ್ಯ ಜಯಂತಿಯನ್ನು ಇದೇ ೯ರಂದು ಬೆಳಗ್ಗೆ ೧೦ ಗಂಟೆಗೆ ಕಾರವಾರದ ಸರ್ಕಾರಿ

ಪ್ರಥಮ ದರ್ಜೆ ಮಹಿಳಾ ಕಾಲೇಜು ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಉದ್ಘಾಟಿಸಲಿದ್ದಾರೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

<><><><>

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕು ಕಚೇರಿಯ ಟಪಾಲು ಶಾಖೆಗೆ ದಿಢೀರ್ ಭೇಟಿ ನೀಡಿದ ಜಿಲ್ಲಾಧಿಕಾರಿ ಡಾ.ಕುಮಾರ, ಸ್ವೀಕೃತವಾಗಿದ್ದ ಅರ್ಜಿಗಳ ಬಗ್ಗೆ ಪರಿಶೀಲನೆ ನಡೆಸಿ, ಪ್ರತಿಯೊಂದು ಅರ್ಜಿಗಳನ್ನು ಇ-ಆಫೀಸ್ ತಂತ್ರಾಂಶದ ಮೂಲಕವೇ ರವಾನಿಸುತ್ತಿರುವ ಬಗ್ಗೆ ಪರಿಶೀಲಿಸಿಕೊಂಡು, ಯಾವುದೇ ಅರ್ಜಿಗಳು ಭೌತಿಕವಾಗಿ ಮಂಡನೆಯಾಗದಂತೆ ಕ್ರಮವಹಿಸುವಂತೆ ಸೂಚಿಸಿದ್ದಾರೆ. ವಂಶವೃಕ್ಷ ಮತ್ತು ಆರ್‌ಟಿಸಿ ವಿತರಣೆ ಮಾಡುವಲ್ಲಿ ಯಾವುದೇ ವಿಳಂಬ ಮಾಡದೇ ತ್ವರಿತವಾಗಿ ವಿತರಿಸುವಂತೆ ಸಂಬಂಧಪಟ್ಟ ಶಿರಸ್ತೇದಾರರಿಗೆ ಸೂಚನೆ ನೀಡಿದರು. ಕಂದಾಯ ಇಲಾಖೆಯ ಸೇವೆಗಳು ಶೀಘ್ರವಾಗಿ ಹಾಗೂ ನ್ಯಾಯಸಮ್ಮತವಾಗಿ ಸಾರ್ವಜನಿಕರಿಗೆ ತಲುಪುವಲ್ಲಿ ಶ್ರಮಿಸುವಂತೆ ಅಧಿಕಾರಿ ಹಾಗೂ ಸಿಬ್ಬಂದಿಗೆ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>